# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 565 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ |
| ಉತ್ತರಿಸಬೇಕಾದ ದಿನಾಂಕ | : | 13.12.2024 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಸ್ತುತ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ವಸತಿ ಶಾಲೆಗಳ ಸಂಖ್ಯೆ ಎಷ್ಟು; ಸದರಿ ವಸತಿ ಶಾಲೆಗಳಲ್ಲಿ ದಾಖಲಾಗಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ 821 (ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-144 ಮತ್ತು ಹಿಂದುಳಿದ ವರ್ಗ-174) ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ವಸತಿ ಶಾಲೆ/ಕಾಲೇಜುಗಳಲ್ಲಿ 211920 ವಿದ್ಯಾರ್ಥಿಗಳ ಸಂಖ್ಯೆ ಮಂಜೂರಾಗಿದ್ದು ಈ ಪೈಕಿ 200710 ವಿದ್ಯಾರ್ಥಿಗಳು ದಾಖಲಾಗಿ ವ್ಯಾಸಂಗ ಮಾಡುತ್ತಿದ್ದಾರೆ, |
| ಆ) | 2023-24 ಹಾಗೂ 2024-25ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳಲ್ಲಿ ವಿದ್ಯಾಭ್ಯಾಸ ನಡೆಸುತ್ತಿರುವ ವಿದ್ಯಾರ್ಥಿಗಳಿಗೆ ಪ್ರತಿ ಮಾಹೆಯಾನ ಶುಚಿತ್ವ ಕಿಟ್‌ಗಳನ್ನು ಸರಿಯಾದ ಸಮಯಕ್ಕೆ ವಿತರಿಸದೇ ಇರುವ ವಿಷಯ ಸರ್ಕಾರಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಈ ಕುರಿತು ಕೈಗೊಂಡ ಕ್ರಮಗಳೇನು; | ಬಂದಿರುತ್ತದೆ.<br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 2023-24ನೇ ಸಾಲಿನಲ್ಲಿ ಶುಚಿ ಸಂಭ್ರಮ ಕಿಟ್‌ಗಳನ್ನು ಪೂರೈಸಲು ಒಟ್ಟಾರೆ ರೂ.27,06,21,477/- ಗಳ ವೆಚ್ಚದಲ್ಲಿ ಖರೀದಿಸಲು ಆದೇಶಿಸಲಾಗಿದ್ದು, ಅದರನ್ವಯ, ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳಿಗೆ ಶುಚಿ ಸಂಭ್ರಮ ಕಿಟ್ ಗಳನ್ನು ಪೂರೈಸಲಾಗಿರುತ್ತದೆ. |
| ಇ) | 2023-24 ಹಾಗೂ 2024-25ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಿಗೆ ಶುಚಿತ್ವ ಕಿಟ್‌ಗಳಿಗಾಗಿ ಪಾವತಿ ಮಾಡಿರುವ ಒಟ್ಟು ಮೊತ್ತ ಎಷ್ಟು; ಪಾವತಿಸಬೇಕಾದ ಮೊತ್ತ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು) | ಪ್ರಸ್ತುತ 2024-25ನೇ ಸಾಲಿಗೆ ಸಂಬಂಧಿಸಿದಂತೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಶುಚಿ ಸಂಭ್ರಮ ಕಿಟ್‌ಗಳನ್ನು ಒಟ್ಟಾರೆ ರೂ.30,39,31,000/- ಗಳ ವೆಚ್ಚದಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಕಲಂ 4(ಜಿ) ರಡಿ ವಿನಾಯಿತಿ ಹೊಂದಿರುವ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ ರವರಿಂದ ಖರೀದಿಸಲು ಆದೇಶಿಸಲಾಗಿರುತ್ತದೆ. ಅದರನ್ವಯ, ಸದರಿ ಸಂಸ್ಥೆಗೆ ದಿನಾಂಕ:17.08.2024 ರಂದು ಸರಬರಾಜು ಆದೇಶವನ್ನು ನೀಡಲಾಗಿದ್ದು, |

| | | |
|---|---|---|
| | | ಸದರಿ ಸಂಸ್ಥೆಯವರು ಅಕ್ಟೋಬರ್ ಮಾಹೆಯಲ್ಲಿ ಮೊದಲ ತ್ರೈಮಾಸಿಕ ಅವಧಿಯ ಶುಚಿ ಸಂಭ್ರಮ ಕಿಟ್‌ಗಳನ್ನು 821 ವಸತಿ ಶಾಲೆ/ಕಾಲೇಜುಗಳಿಗೆ ಪೂರೈಸಿರುತ್ತಾರೆ. 2ನೇ ತ್ರೈಮಾಸಿಕ ಅವಧಿಯ ಶುಚಿ ಸಂಭ್ರಮ ಕಿಟ್‌ಗಳ ಸರಬರಾಜು ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |

ಸಕಇ 311 ಎಂಡಿಎಸ್ 2024

(ಡಾ|| ಹೆಚ್.ಸಿ. ಮಹದೇವಪ್ಪ )
ಸಮಾಜ ಕಲ್ಯಾಣ ಸಚಿವರು